ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಜ್ಯೋತಿ ಸಂಜೀವಿನಿ ಮತ್ತು ಆಯುಷ್ಮಾನ್ ಭಾರತ್ ಯೋಜನೆ ಕುರಿತು

ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

421 (550) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರಿ ನೌಕರರು ಮತ್ತು ಕುಟುಂಬದವರಿಗಾಗಿ ಇರುವ ಜ್ಯೋತಿ ಸಂಜೀವಿನಿ ಯೋಜನೆಯನ್ನು ಆಯುಷ್ಮಾನ್ ಭಾರತ್ ಯೋಜನೆಯೊಂದಿಗೆ ಸಂಯೋಜಿಸಲಾಗಿದೆಯೇ;

(ಆ) ಸದರಿ ಎರಡು ಯೋಜನೆಗಳನ್ನು ಸಂಯೋಜಿಸಿ ಯಾವಾಗ ಆದೇಶವನ್ನು ಹೊರಡಿಸಲಾಗಿದೆ;

(ಇ) ಯಾವ ಯಾವ ಖಾಯಿಲೆಗಳಿಗೆ ಈ ಯೋಜನೆಯಡಿಯಲ್ಲಿ ಚಿಕಿತ್ಸೆ ಪಡೆಯಬಹುದು;

(ಈ) ಮಾರಕ ಖಾಯಿಲೆಗಳ ಚಿಕಿತ್ಸೆಗಾಗಿ ರೋಗಿಯನ್ನು ಇತರ ಖಾಸಗಿ ಆಸ್ಪತ್ರೆಗಳಿಗೆ ದಾಖಲಿಸಿದಾಗ ಚಿಕಿತ್ಸೆಗಳಿಗಾಗಿ ಅನುಸರಿಸುವ ನಿಯಮಗಳೇನು;

(ಉ) ಖಾಸಗಿ ಆಸ್ಪತ್ರೆಗಳಿಗೆ ದಾಖಲಾಗಿ ಚಿಕಿತ್ಸೆ ಪಡೆಯುವಾಗ ಸದರಿ ಯೋಜನೆಯ ಅಡಿಯಲ್ಲಿ ಪ್ರತಿ ಖಾಯಿಲೆಗೆ ಇರುವ ದರದ ವಿವರ ನೀಡುವುದು ?